ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ
Government of Karnataka
Department of Collegiate Education

NO. 1, 2nd Floor, DTE Building, Palace Road, Bangalore - 560 001; Phone: 080 22263327; email: bngcce@kar.nic.in

ಸಂಖ್ಯೆ: ಕಾಶಿಇ/ಮಾತಂವಿ/05/ಸಾಮಾನ್ಯ /2018-19

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ
ಬೆಂಗಳೂರು, ದಿನಾಂಕ: 18.09.2018

# ಸುತ್ತೋಲೆ

**ವಿಷಯ:** ಆಧಾರ ನೋಂದಣಿ/ಅಪ್‌ಡೇಟ್ ಕ್ಯಾಂಪ್‌ಗಳನ್ನು ಆಯೋಜಿಸುವ ಬಗ್ಗೆ.

**ಉಲ್ಲೇಖ:**
1. ಭಾರತೀಯ ವಿಶಿಷ್ಟ ಗುರುತು ಪ್ರಾಧಿಕಾರ (ಯುಐಡಿಎಐ) ಭಾರತ ಸರ್ಕಾರ, ಇವರ ಸುತ್ತೋಲೆ ಸಂಖ್ಯೆ: 4(4)/57/146/2012/ಇ&ಯು ದಿನಾಂಕ: 05.09.2018.
2. ಯೋಜನಾ ನಿರ್ದೇಶಕರು, ಇ-ಆಡಳಿತ ಕೇಂದ್ರ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ: ಇಜಿ/71/ಕೆಆರ್‌ಡಿಹೆಚ್/2015/1273 ದಿನಾಂಕ: 06.09.2018.

******

ಪ್ರತಿಯೊಬ್ಬ ಭಾರತೀಯನಿಗೂ ನಿರ್ದಿಷ್ಟವಾದ ಮತ್ತು ಪ್ರತ್ಯೇಕವಾದ ಗುರುತನ್ನು ನೀಡುವ ಉದ್ದೇಶದಿಂದ ಆಧಾರ್ ಕಾರ್ಯಕ್ರಮವನ್ನು ರೂಪಿಸಲಾಗಿದ್ದು ಹೊಸ ಮೊಬೈಲ್ ಸಂಪರ್ಕವನ್ನು ಪಡೆದುಕೊಳ್ಳಲು, ಬ್ಯಾಂಕ್ ಖಾತೆಗಳನ್ನು ತೆರೆಯಲು/ನಿರ್ವಹಿಸಲು, ಚಾಲಕ ಪರವಾನಿಗೆ ಪಡೆಯಲು, ವಿದ್ಯಾರ್ಥಿ ವೇತನ, ಫೆಲೋಶಿಪ್ ಪಡೆಯಲು, ಬೋರ್ಡ್/ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಬರೆಯಲು, ಸರಾಗವಾಗಿ ಪಾಸ್‌ಪೋರ್ಟ್ ಪಡೆಯಲು ಹಾಗೂ ಇನ್ನಿತರ ಅನೇಕ ಮುಖ್ಯ ಪ್ರಕ್ರಿಯೆಗಳನ್ನು ಪೂರೈಸಿಕೊಳ್ಳಲು ಆಧಾರ್ ಕಾರ್ಡ್ ಅನಿವಾರ್ಯವಾಗಿರುತ್ತದೆ.

ಈ ಹಿನ್ನೆಲೆಯಲ್ಲಿ, ಆಧಾರ್ ಕಾರ್ಡ್ ವಿದ್ಯಾರ್ಥಿಗಳಿಗೂ ಅತ್ಯಗತ್ಯ ಹಾಗೂ ಅನಿವಾರ್ಯವಾಗಿರುವುದರಿಂದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರು ಆಧಾರ್ ಕಾರ್ಡಿನ ಪ್ರಾಮುಖ್ಯತೆಯ ಕುರಿತು ವಿದ್ಯಾರ್ಥಿಗಳಲ್ಲಿ ಅರಿವು ಮೂಡಿಸಿ 'ಆಧಾರ್ ನೊಂದಣಿ/ಅಪ್‌ಡೇಟ್' ಮಾಡಿಕೊಳ್ಳಲು ಪ್ರೋತ್ಸಾಹಿಸಲು ಸೂಕ್ತ ಕ್ರಮಗಳನ್ನು ವಹಿಸುವಂತೆ ಸೂಚಿಸಲಾಗಿದೆ. ಮುಂದುವರೆದು ಆಧಾರ್ ನೊಂದಣಿ ಇಲ್ಲದ ವಿದ್ಯಾರ್ಥಿಗಳಿಗೆ ಕಾಲೇಜು ಪ್ರವೇಶಾತಿ ನಿರಾಕರಿಸುವಂತಿಲ್ಲ ಹಾಗೂ www.uidai.gov.in ವೆಬ್‌ಸೈಟ್‌ಅನ್ನು ಸಂಪರ್ಕಿಸಿ ಹತ್ತಿರದಲ್ಲಿ ಲಭ್ಯವಿರುವ ಬ್ಯಾಂಕ್ ಮತ್ತು ಅಂಚೆ ಕಛೇರಿಗಳಂತಹ ಆಧಾರ್ ನೊಂದಣಿ ಕೇಂದ್ರಗಳ ಮೂಲಕ ಅಥವಾ ಅಗತ್ಯವಿದ್ದಲ್ಲಿ ಆಧಾರ್ ನೊಂದಣಿ/ಅಪ್‌ಡೇಟ್ ಕ್ಯಾಂಪ್‌ಗಳನ್ನು ಕಾಲೇಜುಗಳಲ್ಲಿ ಏರ್ಪಡಿಸುವ ಮೂಲಕ ಎಲ್ಲಾ ವಿದ್ಯಾರ್ಥಿಗಳು ಆಧಾರ್ ಕಾರ್ಡ್‌ಗಳನ್ನು ಪಡೆದುಕೊಳ್ಳಲು ಕ್ರಮ ವಹಿಸುವಂತೆ ಸೂಚಿಸಿದೆ.

ಕಾಲೇಜು ಶಿಕ್ಷಣ ಆಯುಕ್ತರು

**ಇವರಿಗೆ,**

1. ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ
2. ಯೋಜನಾ ನಿರ್ದೇಶಕರು, ಯುಐಡಿ ಮತ್ತು ಕೆಆರ್‌ಡಿಹೆಚ್, ಇ-ಆಡಳಿತ ಕೇಂದ್ರ, ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ, ಬೆಂಗಳೂರು – ಮಾಹಿತಿಗಾಗಿ
3. ಕಾಲೇಜು ಶಿಕ್ಷಣ ನಿರ್ದೇಶಕರ ಆಪ್ತ ಶಾಖೆ – ಮಾಹಿತಿಗಾಗಿ